<u>ದಿನಾಂಕಃ**20-06-2025** ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣವಚನ ಮಾಡಿಸಲಾಯಿತು**.**</u>

<u>ಪಾಟೀ ಸವಾಲುಃ **1** ಮತ್ತು **2** ನೇ ಎದುರುದಾರರ ಪರ ಶ್ರೀ ಎಂ ಎಸ್ ಬಿ ವಕೀಲರಿಂದಃ</u>

ಮೃತ ಕೇಶವ ನನ್ನ ಮಗ ಇರುತ್ತಾರೆ ಎಂದರೆ ಸರಿ. ನನ್ನ ಮಗ ನೀಲೇಂದ್ರ ಆಚಾರಿಯವರ ಜೊತೆ ಗಾರೆ ಕೆಲಸಕ್ಕೆ ಹೋಗುತ್ತಿದ್ದರು. ನನ್ನ ಮಗನಿಗೆ ಗಾರೆ ಕೆಲಸ ಹೊರತು ಪಡಿಸಿ ಬೇರೆ ಯಾವುದೇ ಕೆಲಸ ಬರುತ್ತಿರಲಿಲ್ಲ ಎಂದರೆ ಸರಿ. ದಿನಾಂಕ 24.10.2023 ರಂದು ನನ್ನ ಮಗ ಬೆಳಿಗ್ಗೆ 09.45 ಗಂಟೆಗೆ ಬೈಕಿನಲ್ಲಿ ಹಿಂಬದಿ ಸವಾರನಾಗಿ ಹೋಗುತ್ತಿರಲಿಲ್ಲ ಎಂದರೆ ಸರಿಯಲ್ಲ. ಆ ದಿನ ವಾಹನವನ್ನು 1 ನೇ ಎದುರುದಾರರು ಚಾಲಯಿಸುತ್ತಿರಲಿಲ್ಲ ಎಂದರೆ ಸರಿಯಲ್ಲ. ಆ ದಿನ 1 ನೇ ಎದುರುದಾರರು ಸದರಿ ಬೈಕನ್ನು ಚಲಾಯಿಸುತ್ತಾ ಇಲ್ಲದೇ ಇದ್ದರು ನಾನು ಚಲಾಯಿಸುತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

2. ಕೃಷ್ಣಪ್ಪ ಇವರು ನನಗೆ ಮಗನಾಗಬೇಕು. ಸದರಿ ದೂರಿನಲ್ಲಿ ನನ್ನ ಮಗ ಕೀರ್ತಿರಾಜ್ ಎನ್ನುವವರು ಬೈಕನ್ನು ಚಲಾಯಿಸುತ್ತಿದ್ದರು ಎಂದು ಹೇಳಿರುವ ಬಗ್ಗೆ ನನಗೆ ಗೊತ್ತಿರುತ್ತದೆ. ಪ್ರಥಮ ವರ್ತಮಾನ ವರದಿಯಲ್ಲಿ ಕೀರ್ತಿರಾಜ್ ಇವರ ಮೇಲೆ ಪ್ರಕರಣ ದಾಖಲಾಗಿತ್ತು ಎಂದರೆ ಸರಿ. ಕ್ರಿಮಿನಲ್ ಪ್ರಕರಣದಲ್ಲಿ ಸಾಕ್ಷಿದಾರರು ಪೃಥ್ವಿರಾಜ್ ಇವರ ತಪ್ಪಿನಿಂದ ಅಪಘಾತ ಆಗಿರುವುದಿಲ್ಲ ಎಂದು ಅಭಿಯೋಜನೆಗೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುತ್ತಾರೆ ಎಂದರೆ ಸರಿ. ಸದರಿ ಪ್ರಕರಣದಲ್ಲಿ ಪೃಥ್ವಿರಾಜ್ ಈತನ ಅಪರಾಧ ಮಾಡಿರುವುದಿಲ್ಲ ಬಿಡುಗಡೆಯಾಗಿರುತ್ತಾನೆ ಎಂದರೆ ನನಗೆ ಗೊತ್ತಿರುವುದಿಲ್ಲ. ಪೃಥ್ವಿರಾಜ್ ಈತನು ವಾಹನವನ್ನು ಚಲಾಯಿಸದೇ ಇದ್ದಕಾರಣ ಬಿಡುಗಡೆ ಹೊಂದಿರುತ್ತಾನೆ ಎಂದರೆ ನನಗೆ ಗೊತ್ತಿರುವುದಿಲ್ಲ. ನಾನು ಪೊಲೀಸರ ಮೇಲೆ ಪ್ರಭಾವ ಬೀರಿ 1 ನೇ ಎದುರುದಾರರ ವಿರುದ್ಧ ಸುಳ್ಳು ದೂರನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. 1 ಮತ್ತು 2 ನೇ ಎದುರುದಾರರು ಪರಿಹಾರ ಕೊಡಲು ಬಾಧ್ಯಸ್ತರು ಇರುವುದಿಲ್ಲ ಎಂದರೆ ಸರಿಯಲ್ಲ.

3. ನನ್ನ ಮಗ ಮಾಸಿಕ ರೂ.25,000/- ದುಡಿಯುತ್ತಿದ್ದ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮಗ ಮಾಸಿಕ ರೂ. 25,000/- ಆದಾಯ ಗಳಿಸುತ್ತಿದ್ದ ಬಗ್ಗೆ ನಾನು ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿರುವುದಿಲ್ಲ. ಅಪಘಾತ ಪಡಿಸಿದ ವಾಹನಕ್ಕೆ ವಿಮೇ ಇತ್ತಾ ಎಂದರೆ ಸಾಕ್ಷಿ ನನಗೆ ಗೊತ್ತಿರುವುದಿಲ್ಲ ಎಂದು ಉತ್ತರಿಸುತ್ತಾರೆ. ನಾನು ಹೆಚ್ಚಿನ ಪರಿಹಾರ ಪಡೆಯುವ ಸಲುವಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ **3** ನೇ ಎದುರುದಾರರ ಪರ ವಕೀಲರು ಗೈರು ಹಾಜರಿದ್ದು ಅವರ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.</u>

<u>ಮರು ವಿಚಾರಣೆಃ ಇಲ್ಲಃಃ</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸ ಇ ಎ ಒ

Sd/-xxx
ಹಿರಿಯ ಸಿವಿಲ್ ನ್ಯಾಯಾಧೀಶರುಃ ನ.ರಾ.ಪುರ,
ಸಂಚಾರಿ ನ್ಯಾಯಾಲಯ, ಕೊಪ್ಪ.

ಸಾಕ್ಷಿದಾರರ ಸಹಿಃ